All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

28.11.2025 19.35 PM

****************

ಮುಖ್ಯಾಂಶಗಳು

- ಕೇಂದ್ರ ಸರ್ಕಾರದ ಹೆಚ್ಚಿನ ಕಾರ್ಯಕ್ರಮಗಳಿಗೆ ಭಗವದ್ಗೀತೆ ಸ್ಪೂರ್ತಿ - ಪ್ರಧಾನಿ ನರೇಂದ್ರ ಮೋದಿ
- ಪ್ರಸಕ್ತ ಹಣಕಾಸು ವರ್ಷದ ಎರಡನೇ ತ್ರೈಮಾಸಿಕದಲ್ಲಿ ದೇಶದ ಜಿಡಿಪಿ ಬೆಳವಣಿಗೆ ಶೇಕಡ ೮.೨ ರಷ್ಟು ದಾಖಲು
- ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮುಂದಿನ ತಿಂಗಳು ೪ ರಿಂದ ಭಾರತಕ್ಕೆ ಎರಡು ದಿನಗಳ ಭೇಟಿ
- ಜಲ ಜೀವನ್ ಮಿಷನ್ ಅಡಿಯಲ್ಲಿ ದೇಶಾದ್ಯಂತ ೧೫ ಕೋಟಿ ಗ್ರಾಮೀಣ ಮನೆಗಳಿಗೆ ನಲ್ಲಿ ನೀರಿನ ಸಂಪರ್ಕ - ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್

***************

ಶ್ರೀಕೃಷ್ಣನ ಬೋಧನೆಯಾದ ಭಗವದ್ಗೀತೆಯು ಕೇಂದ್ರ ಸರ್ಕಾರದ ಹೆಚ್ಚಿನ ಕಾರ್ಯಕ್ರಮಗಳಿಗೆ ಸ್ಪೂರ್ತಿಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಉಡುಪಿಯ ಶ್ರೀಕೃಷ್ಣ ಮಠದಲ್ಲಿ ಇಂದು ಲಕ್ಷಕಂಠ ಗೀತ ಪಾರಾಯಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸರ್ವೇಜನ ಸುಖಿನೊಭವಂತು, ವಸುದೈವ ಕುಟುಂಬಕಂ, ಧರ್ಮೊ ರಕ್ಷತಿ ರಕ್ಷಿತಹ- ಇವು ಆಯುಷ್ಮಾನ್ ಭಾರತ್, ಪ್ರಧಾನಮಂತ್ರಿ ಆವಾಸ್ ಯೋಜನೆ, ನಾರಿಶಕ್ತಿ ಅಭಿಯಾನ, ಸೌರ ಮೈತ್ರಿ ಮಿಷನ್ ಹಾಗೂ ಮಿಷನ್ ಸುದರ್ಶನ್ ಚಕ್ರ ನಂತಹ ರಾಷ್ಟ್ರೀಯ ಭದ್ರತಾ ಕಾರ್ಯಕ್ರಮಗಳಿಗೆ ಪ್ರೇರಣೆ ನೀಡಿದೆ ಎಂದರು.

ಧ್ವನಿ: ಪ್ರಧಾನಮಂತ್ರಿ

ಇದೇ ವೇಳೆ ಅವರು, ಭಾರತೀಯರು ತಮ್ಮ ಪರಂಪರೆ ಮತ್ತು ಸಂಪ್ರದಾಯಗಳಿಗೆ ಹೆಸರುವಾಸಿಯಾದ ದೇಶದ ೨೫ ಸ್ಥಳಗಳಿಗೆ ಭೇಟಿ ನೀಡಬೇಕೆಂದು ಕರೆ ನೀಡಿದರು.

ರಾಷ್ಟ್ರೀಯ ಉದ್ದೇಶಕ್ಕಾಗಿ ಮೀಸಲಾಗಿರುವ ಒಂಬತ್ತು ನಿರ್ಣಯಗಳಿಗೆ ನಾಗರಿಕರು ಬದ್ಧತೆಯನ್ನು ತೋರಿಸಬೇಕೆಂದು ಪ್ರಧಾನಿ ನರೇಂದ್ರ ಮೋದಿ ಮನವಿ ಮಾಡಿದರು.

ನೀರು ಮತ್ತು ನದಿಗಳನ್ನು ಸಂರಕ್ಷಿಸಲು, ಏಕ ಪೇಡ್ ಮಾ ಕೆ ನಾಮ್ ಅಭಿಯಾನದ ಭಾಗವಾಗಲು, ಕನಿಷ್ಠ ಒಬ್ಬ ಬಡವನನ್ನು ಬಡತನದಿಂದ ಮೇಲೆತ್ತಲು ಮತ್ತು ದೇಶದ ಆರ್ಥಿಕತೆ ಹಾಗೂ ಸ್ವದೇಶಿ ಆಂದೋಲನವನ್ನು ಪ್ರೋತ್ಸಾಹಿಸಲು ಅವರು ಜನರ ಬೆಂಬಲವನ್ನು ಕೋರಿದರು.

ನೈಸರ್ಗಿಕ ಕೃಷಿಯನ್ನು ಪ್ರೋತ್ಸಾಹಿಸಲು, ರಾಗಿ ಬಳಸಿ ಆರೋಗ್ಯಕರ ಜೀವನಶೈಲಿಯನ್ನು ನಡೆಸಲು, ತೈಲ ಬಳಕೆಯನ್ನು ಕಡಿಮೆ ಮಾಡಲು ಮತ್ತು ಯೋಗವನ್ನು ದೈನಂದಿನ ಜೀವನದ ಭಾಗವಾಗಿ ಅಳವಡಿಸಿಕೊಳ್ಳಲು ದೇಶವಾಸಿಗಳಿಗೆ ಕರೆ ನೀಡಿದ ಪ್ರಧಾನಿ, ಇಂದು ಉಲ್ಲೇಖಿಸಿದ ಒಂಬತ್ತು ನಿರ್ಣಯಗಳಲ್ಲಿ, ನಮ್ಮ ಪ್ರಾಚೀನ ಹಸ್ತಪ್ರತಿಗಳ ಸಂರಕ್ಷಣೆಯೂ ಒಂದು. ನಮ್ಮ ಪ್ರಾಚೀನ ಜ್ಞಾನವನ್ನು ಮುಂದಿನ ಪೀಳಿಗೆಗೆ ತಲುಪಿಸಬೇಕು ಎಂದು ಹೇಳಿದರು.

ಇದಕ್ಕೂ ಮುನ್ನ, ಕನಕನ ಕಿಂಡಿಯ ಮೂಲಕ ಕೃಷ್ಣ ದರ್ಶನ ಮಾಡಿದ ಪ್ರಧಾನಿ, ಕನಕ ಗೋಪುರದ ಮುಂದಿರುವ ಕನಕದಾಸರ ಪುತ್ಥಳಿಗೆ ಪುಷ್ಪಾರ್ಚನೆ ಸಲ್ಲಿಸಿ, ಸ್ವರ್ಣಲೇಪಿತ ಕನಕನ ಕಿಂಡಿ ಉದ್ಘಾಟನೆ ಮಾಡಿದರು. ಮಠದ ಪರಿಸರದಲ್ಲಿ ವೈದಿಕರಿಂದ ಉಪನಿಷತ್ತು, ವೇದ, ಗೀತೆ ಪಠಣ ನಡೆಯಿತು.

ಬಳಿಕ ಕೃಷ್ಣನ ಪ್ರಸಾದ ಸ್ವೀಕರಿಸಿದ ಪ್ರಧಾನಿ, ಆಚಾರ್ಯ ಮಧ್ವರು ಕುಳಿತ ಪೀಠವನ್ನು ವೀಕ್ಷಿಸಿ, ಭೋಜನ ಶಾಲೆಯ ಮುಖ್ಯ ಪ್ರಾಣ ದೇವರು ಹಾಗೂ ಮಠದೊಳಗಿನ ವಿವಿಧ ಗುಡಿಗಳ ದರ್ಶನ ಪಡೆದರು. ಗೀತಾ ಮಂದಿರದಲ್ಲಿ ನೂತನವಾಗಿ ರಚಿಸಿರುವ ಅನಂತಪದ್ಮನಾಭ ದೇವರ ಪ್ರತಿಮೆಯನ್ನು ಅನಾವರಣಗೊಳಿಸಿದರು. ಪ್ರಧಾನಿ ಅವರಿಗೆ ಬೆಳ್ಳಿಯ ಕಡಗೋಲು ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಪುತ್ತಿಗೆ ಶ್ರೀಗಳು ಪ್ರಧಾನಿ ಅವರಿಗೆ 'ಭಾರತ ಭಾಗ್ಯ ವಿಧಾತ' ಎಂಬ ಬಿರುದು ನೀಡಿ ಗೌರವಿಸಿದರು.

ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ, ಬನ್ನಂಜೆ ನಾರಾಯಣ ಗುರು ವೃತ್ತದ ಬಳಿಯಿಂದ ರೋಡ್ ಶೋನಲ್ಲಿ ಪಾಲ್ಗೊಂಡರು.

***************

ಗೋವಾದ ಗೋಕರ್ಣ ಪರ್ತಗಾಳಿ ಜಿವೋತ್ತಮ ಮಠದ ೫೫೦ನೇ ಸಂಸ್ಥಾಪನಾ ವಾರ್ಷಿಕೋತ್ಸವದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಿದ್ದರು.

ಈ ಮಠವು ಜನರಿಗೆ ನಿರ್ದೇಶನ ನೀಡುವ ಕೇಂದ್ರವಾಗಿ ಹೊರಹೊಮ್ಮಿದೆ. ಬದಲಾದ ಕಾಲ ಮತ್ತು ಸವಾಲುಗಳ ಹೊರತಾಗಿಯೂ ಗಣಿತವು ಎಂದಿಗೂ ತನ್ನ ದಿಕ್ಕನ್ನು ಕಳೆದುಕೊಂಡಿಲ್ಲ. ಕಳೆದ ೫೫೦ ವರ್ಷಗಳಲ್ಲಿ ಈ ಮಠವು ಕಾಲ ಮತ್ತು ಯುಗಗಳ ಅನೇಕ ಆಗು-ಹೋಗುಗಳಿಗೆ ಸಾಕ್ಷಿಯಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ಮೋದಿ ಹೇಳಿದ್ದಾರೆ.

***************

ಸಮಾಜವನ್ನು ಹೆಚ್ಚು ಒಳಗೊಳ್ಳುವ ಶಾಂತಿಯುತ, ಆರೋಗ್ಯಕರ ಮತ್ತು ಮೌಲ್ಯಾಧಾರಿತವಾಗಿಸಲು ಭಾರತ ಸರ್ಕಾರ ಹಲವಾರು ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

೨೦೨೫-೨೬ರ ಬ್ರಹ್ಮಕುಮಾರಿ ಸಂಸ್ಥೆಯ ವಾರ್ಷಿಕ ಧ್ಯೇಯವಾಕ್ಯ 'ವಿಶ್ವ ಏಕತೆ ಮತ್ತು ವಿಶ್ವಾಸಕ್ಕಾಗಿ ಧ್ಯಾನ' ಉದ್ಘಾಟನಾ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಜಾಗತಿಕವಾಗಿ ಯೋಗ ಮತ್ತು ಧ್ಯಾನವನ್ನು ಉತ್ತೇಜಿಸುವುದು ಹಾಗೂ ಅಂತಾರಾಷ್ಟ್ರೀಯ ಯೋಗ ದಿನದ ಅಭಿಯಾನವನ್ನು ಮುನ್ನಡೆಸುವುದು ಅಂತಹ ಉಪಕ್ರಮಗಳಾಗಿವೆ ಎಂದರು.

***************

ಪ್ರಸಕ್ತ ಹಣಕಾಸು ವರ್ಷದ ಎರಡನೇ ತ್ರೈಮಾಸಿಕದಲ್ಲಿ ದೇಶದ ಜಿಡಿಪಿ ಶೇಕಡ ೮.೨ ರಷ್ಟು ಬೆಳವಣಿಗೆ ದಾಖಲಿಸಿದೆ. ಉತ್ಪಾದನೆ, ಮಾಧ್ಯಮಿಕ ಮತ್ತು ತೃತೀಯ ವಲಯಗಳಲ್ಲಿನ ಬಲವಾದ ಕಾರ್ಯಕ್ಷಮತೆಯೇ ಇದಕ್ಕೆ ಕಾರಣವಾಗಿದೆ.

ಪ್ರಸಕ್ತ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಜಿಡಿಪಿ ಬೆಳವಣಿಗೆ ೭.೮ ರಷ್ಟು ದಾಖಲಾಗಿತ್ತು. ಈ ಹಣಕಾಸು ವರ್ಷದ ಎರಡನೇ ತ್ರೈಮಾಸಿಕದಲ್ಲಿ ದೇಶದ ನಾಮಾಂಕಿತ ಜಿಡಿಪಿ ಶೇಕಡ ೮.೭ ರಷ್ಟು ಬೆಳವಣಿಗೆ ಕಂಡಿದೆ.

ಪ್ರಸಕ್ತ ಹಣಕಾಸು ವರ್ಷದ ಎರಡನೇ ತ್ರೈಮಾಸಿಕದಲ್ಲಿ ಶೇಕಡ ೮.೨ ರಷ್ಟು ಜಿಡಿಪಿ ಬೆಳವಣಿಗೆಯನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ.

ಈ ಬೆಳವಣಿಗೆಯು ಉತ್ತೇಜನಕಾರಿಯಾಗಿದೆ. ಇದು ಕೇಂದ್ರ ಸರ್ಕಾರದ ಬೆಳವಣಿಗೆಯ ಪರ ನೀತಿಗಳು ಮತ್ತು ಸುಧಾರಣೆಗಳ ಪರಿಣಾಮವನ್ನು ಪ್ರತಿಬಿಂಬಿಸುತ್ತದೆ. ಇದು ದೇಶದ ಜನರ ಕಠಿಣ ಪರಿಶ್ರಮ ಮತ್ತು ಉದ್ಯಮಶೀಲತೆಯನ್ನು ಪ್ರತಿಬಿಂಬಿಸುತ್ತದೆ. ಸರ್ಕಾರವು ಸುಧಾರಣೆಗಳನ್ನು ಮತ್ತು ಪ್ರತಿಯೊಬ್ಬ ನಾಗರಿಕನ ಜೀವನವನ್ನು ಹಸನುಗೊಳಿಸುವುದನ್ನು ಮುಂದುವರಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ಮೋದಿ ಹೇಳಿದ್ದಾರೆ.

***************

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮುಂದಿನ ತಿಂಗಳು ೪ ರಿಂದ ಭಾರತಕ್ಕೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಪುಟಿನ್ ಅವರು ಭಾರತಕ್ಕೆ ಭೇಟಿ ನೀಡಲಿದ್ದಾರೆ.

ಭೇಟಿಯ ಸಮಯದಲ್ಲಿ ರಷ್ಯಾ ಅಧ್ಯಕ್ಷರು, ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಪುಟಿನ್ ಅವರ ಗೌರವಾರ್ಥ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಔತಟಕೂಟವನ್ನು ಆಯೋಜಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ಈ ಭೇಟಿಯು, ಭಾರತ-ರಷ್ಯಾ ನಡುವೆ ದ್ವಿಪಕ್ಷೀಯ ಸಂಬಂಧಗಳಲ್ಲಿನ ಪ್ರಗತಿಯನ್ನು ಪರಿಶೀಲಿಸಲು ಅವಕಾಶ ಒದಗಿಸುತ್ತದೆ. ಅಲ್ಲದೇ, ಉಭಯ ದೇಶಗಳ ನಡುವೆ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಹಾಗೂ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಅವಕಾಶ ನೀಡುತ್ತದೆ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ.

***************

ಜಲ ಜೀವನ್ ಮಿಷನ್ ಅಡಿಯಲ್ಲಿ ದೇಶಾದ್ಯಂತ ೧೫ ಕೋಟಿ ಗ್ರಾಮೀಣ ಮನೆಗಳಿಗೆ ನಲ್ಲಿ ನೀರಿನ ಸಂಪರ್ಕಗಳನ್ನು ಒದಗಿಸಲಾಗಿದೆ ಎಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ನಡೆದ ಸುಜಲಾಂ ಭಾರತ್ ಶೃಂಗಸಭೆ ಉದ್ದೇಶಿಸಿ ಮಾತನಾಡಿದ ಅವರು, ಪ್ರತಿಯೊಬ್ಬ ನಾಗರಿಕರಿಗೂ ಸುಸ್ಥಿರ ನೀರಿನ ಭದ್ರತೆಯನ್ನು ಖಚಿತಪಡಿಸಿಕೊಳ್ಳುವ ಕಡೆಗೆ ಕೇಂದ್ರ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸಿದರು.

***************

ನವದೆಹಲಿಯಲ್ಲಿ ಇಂದು ೩೭ನೇ ಸಂಸದೀಯ ಪ್ರಶಿಕ್ಷಣ ಕಾರ್ಯಕ್ರಮ ೨೦೨೫ ರಲ್ಲಿ ಭಾಗಿಯಾದ ಪ್ರಶಿಕ್ಷಾಣಾರ್ಥಿಗಳನ್ನು ಲೋಕಸಭಾಧ್ಯಕ್ಷ ಓಂ ಬಿರ್ಲಾ ಭೇಟಿಯಾದರು.

ವಿವಿಧ ದೇಶಗಳ ಪ್ರಶಿಕ್ಷಾಣಾರ್ಥಿಗಳೊಂದಿಗೆ ಲೋಕಸಭಾಧ್ಯಕ್ಷರು ಸಂವಾದ ನಡೆಸಿದರು. ಭಾರತದ ಸಂಸದೀಯ ಸಂಪ್ರದಾಯ ಮತ್ತು ಪ್ರಜಾಪ್ರಭುತ್ವ ಮೌಲ್ಯಗಳ ಬಗ್ಗೆ ಪ್ರಶಿಕ್ಷಾಣಾರ್ಥಿಗಳ ಉತ್ಸಾಹ ಸ್ಫೂರ್ತಿದಾಯಕವಾಗಿದೆ. ಇದೊಂದು ಅನನ್ಯ ಅನುಭವವಾಗಿತ್ತು ಎಂದು ಸಾಮಾಜಿಕ ಜಾಲತಾಣದಲ್ಲಿ ಓಂ ಬಿರ್ಲಾ ಹೇಳಿದ್ದಾರೆ.

***************

ಸಮಾಜಕ್ಕೆ ಪ್ರಯೋಜನಕಾರಿಯಾಗುವ ಒಂದು ಸಾವಿರ ಉತ್ಪನ್ನಗಳನ್ನು ಉತ್ಪಾದಿಸುವ ಒಂದು ಸಾವಿರದ ೫೦೦ ಸ್ಟಾರ್ಟ್‌ಅಪ್‌ಗಳನ್ನು ಬೆಂಬಲಿಸುವುದಾಗಿ ಭಾರತದ ಸಾಫ್ಟ್‌ವೇರ್ ತಂತ್ರಜ್ಞಾನ ಪಾರ್ಕ್‌ಗಳ ಮಹಾನಿರ್ದೇಶಕ ಅರವಿಂದ್ ಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಈ ಸ್ಟಾರ್ಟ್‌ಅಪ್‌ಗಳಲ್ಲಿ ಕೆಲವು ಆರೋಗ್ಯ, ಮೂಲಸೌಕರ್ಯ ಮತ್ತು ಕೃಷಿ ಕ್ಷೇತ್ರಗಳಲ್ಲಿ ಪರಿಹಾರಗಳನ್ನು ಒದಗಿಸಲು ಕೃತಕ ಬುದ್ಧಿಮತ್ತೆ ಬಳಸಿಕೊಂಡಿವೆ ಎಂದು ಹೇಳಿದರು.

ಧ್ವನಿ: ಅರವಿಂದ್ ಕುಮಾರ್

***************

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಇದೇ ಭಾನುವಾರ ಬೆಳಿಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ.

ಇದು 'ಮನ್ ಕಿ ಬಾತ್'ನ ೧೨೮ ನೇ ಆವೃತ್ತಿಯಾಗಿದೆ.

*******ಮುಕ್ತಾಯ*******